# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1311 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ. ಜಿ ಪಾಟೀಲ್ (ಸ್ಥಳೀಯ ಸಂಸ್ಥೆ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22.08.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ನಗರದ ಶಹಬಾದ್ ರಸ್ತೆಯಲ್ಲಿರುವ ಕಲ್ಯಾಣ ನಗರದ ಹಿಂದುಳಿದ ವರ್ಗಗಳ ಡಿ.ದೇವರಾಜು ಅರಸು ಮೆಟ್ರಿಕ್-ನಂತರದ ಬಾಲಕರ ವಸತಿ ನಿಲಯದಲ್ಲಿ ಎಷ್ಟು ವಿದ್ಯಾರ್ಥಿಗಳು ಆಶ್ರಯ ಪಡೆದಿದ್ದಾರೆ: (ವಿವರ ನೀಡುವುದು) | ಕಲಬುರಗಿ ನಗರದ ಶಹಾಬಾದ್ ರಸ್ತೆಯಲ್ಲಿರುವ ಕಲ್ಯಾಣ ನಗರದಲ್ಲಿ ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯ (BCWD-2097) ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿ ನಿಲಯದಲ್ಲಿ 125 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿದೆ. |
| ಆ) | ಈ ವಸತಿ ನಿಲಯದಲ್ಲಿ ಸ್ವಚ್ಛತೆಯಿಲ್ಲದೆ ಇಲ್ಲಿ ಸ್ನಾನದ ಗೃಹ, ಶೌಚಾಲಯಗಳು ಮನುಷ್ಯರು ಉಪಯೋಗ ಮಾಡದಂತ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ವಸತಿ ನಿಲಯದ ಸ್ವಚ್ಛತಾ ನಿರ್ವಹಣೆಯ ಜವಾಬ್ದಾರಿಯನ್ನು ಯಾರು ಹಾಗೂ ಇವರ ವಿರುದ್ಧ ಕೈಗೊಂಡ ಕ್ರಮಗಳೇನು; | ಇಲಾಖೆಯ ವಿದ್ಯಾರ್ಥಿನಿಲಯಗಳ ಸ್ವಚ್ಛತೆಯ ನಿರ್ವಹಣೆಯು ವಿದ್ಯಾರ್ಥಿನಿಲಯದ ನಿಲಯ ಮೇಲ್ವಿಚಾರಕರ ಜವಾಬ್ದಾರಿಯಾಗಿರುತ್ತದೆ. ಕಲಬುರಗಿ ನಗರದ ಶಹಾಬಾದ್ ರಸ್ತೆಯಲ್ಲಿರುವ ಕಲ್ಯಾಣ ನಗರದ ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯವು ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಸದರಿ ವಿದ್ಯಾರ್ಥಿನಿಲಯಕ್ಕೆ ಉಪ ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕಲಬುರ್ಗಿ ಜಿಲ್ಲೆ ರವರು ದಿನಾಂಕ: 09.07.2025 ರಂದು ಭೇಟಿ ನೀಡಿ ಪರಿಶೀಲಿಸಿದ್ದು, ಶೌಚಾಲಯ ಮತ್ತು ಸ್ನಾನಗೃಹಗಳು ಸ್ವಚ್ಛವಿಲ್ಲದಿರುವುದನ್ನು ಗಮನಿಸಿ, ನಿಲಯದ ಸ್ವಚ್ಛತೆಯ ನಿರ್ವಹಣೆಯ ಜವಾಬ್ದಾರಿಯನ್ನು ಹೊಂದಿರುವ ನಿಲಯ ಮೇಲ್ವಿಚಾರಕರ ಕರ್ತವ್ಯ ನಿರ್ಲಕ್ಷತೆಯ ಕುರಿತು ಶಿಸ್ತು ಕ್ರಮಕ್ಕಾಗಿ ಶಿಫಾರಸ್ಸು ಮಾಡಿದ್ದು, ವಿದ್ಯಾರ್ಥಿನಿಲಯದ ನಿಲಯ ಮೇಲ್ವಿಚಾರಕರಾದ ಶ್ರೀ ಶರಣಬಸಪ್ಪ ಪಾಟೀಲ್ ಇವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿರುತ್ತದೆ.<br><br>ಮುಂದುವರೆದು, ವಿದ್ಯಾರ್ಥಿನಿಲಯದ ಪ್ಲಂಬಿಂಗ್, ಎಲೆಕ್ಟ್ರಿಕಲ್ ಕೆಲಸ, ಶೌಚಾಲಯದ ಸ್ವಚ್ಛತೆ ಮತ್ತು ದುರಸ್ಥಿ ಹಾಗೂ ವಿದ್ಯಾರ್ಥಿನಿಲಯಕ್ಕೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗಿರುತ್ತದೆ. |
| ಇ) | ವಸತಿ ನಿಲಯದ ಖಾಯಂ ಸಿಬ್ಬಂದಿ ತಮ್ಮ ಬದಲು ಬೇರೆಯವರಿಗೆ ದುಡ್ಡು ಕೊಟ್ಟು ಕೆಲಸ ಮಾಡಿಸುತ್ತಿದ್ದು, ಮೇಲಾಧಿಕಾರಿಗಳ ನಿರ್ಲಕ್ಷತನದಿಂದ ವಸತಿ ನಿಲಯದಲ್ಲಿ ಇಂತಹ ದುಸ್ಥಿತಿ ಇದ್ದು ಸಿಬ್ಬಂದಿ ಹಾಗೂ ಮೇಲಾಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮಕೈಗೊಳ್ಳಲಾವುದು? | ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾಗಿರುವ ಅಡುಗೆಯವರು ಮತ್ತು ಅಡುಗೆ ಸಹಾಯಕರ ಹುದ್ದೆಗಳಿಗೆ ಖಾಯಂ ಸಿಬ್ಬಂದಿಗಳು ಇಲ್ಲದಿದ್ದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಅಡುಗೆಯವರು ಮತ್ತು ಅಡುಗೆ ಸಹಾಯಕರನ್ನು ನೇಮಿಸಿಕೊಂಡು ನಿರ್ವಹಿಸಲಾಗುತ್ತದೆ. ಅದರಂತೆ, ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ / ಹೊರಗುತ್ತಿಗೆಯ ಸಿಬ್ಬಂದಿಯವರೇ ಕೆಲಸ ಮಾಡುತ್ತಿದ್ದು, ಅವರ ಬದಲಿಗೆ ಬೇರೆಯವರಿಂದ ಕೆಲಸ ಮಾಡಿಸಲಾಗುತ್ತಿರುವುದಿಲ್ಲ. |

ಸಂಖ್ಯೆ:ಹಿಂವಕ 869 ಬಿಎಂಎಸ್ 2025

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು